ನಮ್ಮ ಹೊಲ ನಮ್ಮ ರಸ್ತೆ ಯೋಜನೆಯ ಪ್ರಗತಿ

1195 (1440) ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕಳೆದ ಬಾರಿ ಮುಖ್ಯ ಮಂತ್ರಿಗಳ ಬಜೆಟ್ ಭಾಷಣದಲ್ಲಿ ಪ್ರಸ್ತಾಪಿಸಿದ್ದ "ನಮ್ಮ ಹೊಲ ನಮ್ಮ ರಸ್ತೆ" ಯೋಜನೆಯನ್ನು ಜಾರಿಗೊಳಿಸಲಾಗಿದೆಯೇ;

2) ಹೌದಾದರೆ ಯಾವ ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿದೆ;

3) ಇದಕ್ಕಾಗಿ ಬಿಡುಗಡೆಯಾಗಿರುವ ಅನುದಾನವೆಷ್ಟು; ಮಾಡಲಾಗಿರುವ ವೆಚ್ಚ ಎಷ್ಟು;

4) ಈ ಯೋಜನೆ ಜಾರಿಗೆ ಆಗಿರುವ ವಿಳಂಬಕ್ಕೆ ಕಾರಣವೇನು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

1) ಇಲ್ಲ.

2) ಉದ್ಭವಿಸುವುದಿಲ್ಲ

3) ಉದ್ಭವಿಸುವುದಿಲ್ಲ.

4) ಪ್ರಸ್ತಾವನೆಗಳು ಬಂದಿರುವುದಿಲ್ಲವಾದ್ದರಿಂದ ಈ ಯೋಜನೆ ಜಾರಿಗೊಳಿಸಿರುವುದಿಲ್ಲ.

ಸರಕಾರಿ ಹಾಗೂ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಇರುವ ತಾರತಮ್ಯಗಳು

1197 (1371) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಗೂ ಖಾಸಗಿ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ವೇತನ ಭತ್ಯೆಗಳಲ್ಲಿ ಯಾವ ವ್ಯತ್ಯಾಸಗಳು ಇವೆ;

ಆ) ಇದ್ದಲ್ಲಿ, ಈ ರೀತಿಯ ತಾರತಮ್ಯ ಧೋರಣೆ ಅನುಸರಿಸಲು ಕಾರಣವೇನು;

ಇ) ಸರ್ಕಾರಿ ಪ್ರಾಥಮಿಕ ಶಾಲಾ ಮಕ್ಕಳಿಗೆ ನೀಡುವ ಸೌಲಭ್ಯಗಳಾದ ಉಚಿತ ಬಟ್ಟೆ, ಪಠ್ಯ ಪುಸ್ತಕ, ಹೆಣ್ಣು ಮಕ್ಕಳಿಗೆ ಶುಲ್ಕ ರಿಯಾಯಿತಿಯನ್ನು ಖಾಸಗಿ ಶಾಲಾ ಮಕ್ಕಳಿಗೆ ನೀಡದಿರಲು ಕಾರಣಗಳೇನು?

ಪೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಸರ್ಕಾರಿ ಪ್ರಾಥಮಿಕ ಶಿಕ್ಷಕ ಹುದ್ದೆಗೆ ಅನ್ವಯಿಸುವ ವೇತನ ಶ್ರೇಣಿಯನ್ನೇ ಖಾಸಗಿ ಅನುದಾನಿತ ಪ್ರಾಥಮಿಕ ಶಿಕ್ಷಕರಿಗೂ ನೀಡಲಾಗಿದೆ. ಕೆಲವೊಂದು ಭತ್ಯೆಗಳಾದ ವೈದ್ಯಕೀಯ ಮರು ಪಾವತಿ ಭತ್ಯೆ, ಶಿಕ್ಷಕರ ವರ್ಗಾವಣೆ ಭತ್ಯೆ, ಹಬ್ಬದ ಮುಂಗಡ, ಗೃಹ ಖರೀದಿ: ಕಟ್ಟುವಿಕೆ ಹಾಗೂ ಸ್ವಇಚ್ಛಾ ಮೇರೆಗೆ ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದುವವರಿಗೆ ಪಿಂಚಣಿ ಲೆಕ್ಕಾಚಾರಕ್ಕಾಗಿ ಸೇರಿಸಲಾಗುತ್ತಿರುವ 5 ವರ್ಷಗಳ ವೈಟೇಜ್ ಇತ್ಯಾದಿ ಸವಲತ್ತುಗಳನ್ನು ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ನೀಡಲಾಗುತ್ತಿದ್ದು ಖಾಸಗಿ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ನೀಡುತ್ತಿಲ್ಲ.

ಆ) ಖಾಸಗಿ ಅನುದಾನಿತ ಪ್ರಾಥಮಿಕ ಶಿಕ್ಷಕರು ಖಾಸಗಿ ಆಡಳಿತ ಮಂಡಳಿಗಳಿಂದ ನೇಮಕಗೊಂಡಿರುತ್ತಾರೆ. ಮೇಲೆ 'ಅ'ದಲ್ಲಿ ತಿಳಿಸಿರುವ ಹಲವು ಸೌಲಭ್ಯಗಳನ್ನು ಅನುದಾನಿತ